ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಪರಿಷತ್

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ     ದಿನಾಂಕ : DATE : 18/02/2020

# ವಿಧಾನ ಪರಿಷತ್ ಕಲಾಪ ನಡೆಸಲು ನಾಲ್ವರ ನೇಮಕ

ವಿಧಾನ ಪರಿಷತ್: ವಿಧಾನ ಪರಿಷತ್ ಸಭಾಪತಿ ಮತ್ತು ಉಪಸಭಾಪತಿ ಗೈರು ಹಾಜರಾದ ಸಂದರ್ಭದಲ್ಲಿ ಸಭಾಪತಿಯಾಗಿ ಕಲಾಪ ನಡೆಸಲು ಹಿರಿಯ ಸದಸ್ಯರಾದ ಕೆ.ಸಿ. ಕೊಂಡಯ್ಯ, ಅಲ್ಲಂ ವೀರಭದ್ರಪ್ಪ, ತೇಜಸ್ವಿನಿ ಗೌಡ ಹಾಗೂ ಕೆ.ಟಿ. ಶ್ರೀಕಂಠೇಗೌಡ ಅವರನ್ನು ನಾಮ ನಿರ್ದೇಶನ ಮಾಡಲಾಗಿದೆ. ಸೋಮವಾರದಿಂದ ಆರಂಭವಾದ ಪರಿಷತ್‌ನ ಕಲಾಪದ ಪ್ರಾರಂಭದಲ್ಲಿ ಸಭಾಪತಿ ಪ್ರತಾಪಚಂದ್ರ ಶೆಟ್ಟಿ ಅವರು ನಾಲ್ವರು ಸದಸ್ಯರನ್ನು ನಾಮನಿರ್ದೇಶನ ಮಾಡಿರುವುದಾಗಿ ಪ್ರಕಟಿಸಿದರು.

**ಸಲಹಾ ಸಮಿತಿಗೆ ನೇಮಕ:** ವಿಧಾನ ಪರಿಷತ್ ಕಲಾಪ ಸಲಹಾ ಸಮಿತಿಯ ಸದಸ್ಯರನ್ನು ಸಹ ಸಭಾಪತಿಗಳು ಇದೇ ಸಂದರ್ಭದಲ್ಲಿ ಪ್ರಕಟಿಸಿದರು. ಸಭಾಪತಿ ಪ್ರತಾಪಚಂದ್ರ ಶೆಟ್ಟಿ ಅಧ್ಯಕ್ಷರಾಗಿರುವ ಸಮಿತಿಯ ಸದಸ್ಯರಾಗಿ ಉಪಸಭಾಪತಿ ಎಸ್.ಎಲ್. ಧರ್ಮೇಗೌಡ, ಸಭಾನಾಯಕ ಕೋಟ ಶ್ರೀನಿವಾಸ ಪೂಜಾರಿ, ಪ್ರತಿಪಕ್ಷದ ನಾಯಕ ಎಸ್.ಆರ್. ಪಾಟೀಲ್, ಸರ್ಕಾರಿ ಮುಖ್ಯ ಸಚೇತಕ ಮಹಾಂತೇಶ್ ಕವಟಗಿಮಠ, ಜೆಡಿಎಸ್ ಸದಸ್ಯ ಬಸವರಾಜ ಹೊರಟ್ಟಿ, ಬಿಜೆಪಿಯ ಆಯನೂರು ಮಂಜುನಾಥ್, ಕಾಂಗ್ರೆಸ್‌ನ ಕೆ.ಸಿ. ಕೊಂಡಯ್ಯ, ಅಲ್ಲಂ ವೀರಭದ್ರಪ್ಪ ಕಾರ್ಯ ನಿರ್ವಹಿಸಲಿದ್ದಾರೆ. ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಹಾಗೂ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಜೆ.ಸಿ. ಮಾಧುಸ್ವಾಮಿ ವಿಶೇಷ ಆಹ್ವಾನಿತರಾಗಿರುತ್ತಾರೆ.

b